ಇ) ಕಾಮಗಾರಿ ಅಪೂರ್ಣಗೊಂಡಿರುವ ಬಗ್ಗೆ ಗಮನಿಸಲಾಗಿದ್ದು, ಟೆಂಡರ್ ನಿಯಮಾವಳಿಯಂತೆ ಗುತ್ತಿಗೆದಾರರಿಗೆ ಅಂತಿಮ ನೋಟೀಸನ್ನು ದಿನಾಂಕ: 23–2–06ರಂದು ನೀಡಲಾಗಿದೆ. ಗುತ್ತಿಗೆದಾರರು ಕೆಲಸ ಪ್ರಾರಂಭಿಸದಿದ್ದಲ್ಲಿ ಗುತ್ತಿಗೆದಾರರ ಜವಾಬ್ದಾರಿ ಮೇಲೆ ಟೆಂಡರ್‌ಅನ್ನು ರದ್ದುಪಡಿಸಿ, ಬೇರೆ ಏಜೆನ್ಸಿ ಮುಖೇನ ಕಾಮಗಾರಿಯನ್ನು ಪೂರ್ಣಗೊಳಿಸಲು ಕ್ರಮಕೈಗೊಳ್ಳಲಾಗುವುದು.

383(390) ಶ್ರೀ ಶಶಿಕಾಂತ್ ಅಕ್ಕಪ್ಪ ನಾಯಕ (ಹುಕ್ಕೇರಿ) : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೃಷಿ ಮಾರುಕಟ್ಟೆ ನಿಯಮಗಳನ್ನು ಅಳವಡಿಸಿಕೊಳ್ಳದೇ ಅದರ ಕಾಲಮಿತಿಯನ್ನು ಉಲ್ಲಂಘಿಸಿ, ಬಡ್ತಿಗಳನ್ನು ನೀಡುತ್ತಿರುವುದರ ಔಚಿತ್ಯಗಳೇನು; (ವಿವರಿಸುವುದು)

ಆ) ಇದರ ಅಳವಡಿಕೆಗೆ ಎಷ್ಟು ಸಭೆಗಳನ್ನು ಕರೆಯಲಾಗಿದೆ, ಸಭೆಯ ತೀರ್ಮಾನಗಳೇನು, ಈ ಬಗ್ಗೆ ಉಭಯ ಸದನಗಳಲ್ಲಿಯೂ ಪ್ರಸ್ತಾಪಿಸಲ್ಪಟ್ಟು, ನೀಡಿದ ಭರವಸೆಗಳಿಗೆ ಸರ್ಕಾರ ಕೈಗೊಂಡ ಕ್ರಮಗಳೇನು;

ಇ) ಇದರಲ್ಲಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಳವಡಿಸಿಕೊಳ್ಳದೇ ಅಕ್ರಮ ಅವ್ಯವಹಾರಗಳಿಗೆ ಅವಕಾಶ ಮಾಡಿಕೊಟ್ಟಂತಾಗುವುದಿಲ್ಲವೇ;

ಈ) ಈ ನಿಯಮಗಳನ್ನು ಅಳವಡಿಸಿಕೊಳ್ಳುವುದರಿಂದ ಯಾವ ಯಾವ ಪದವೃಂದದ ನೌಕರರಿಗೆ ಬಡ್ತಿ ಲಭ್ಯವಾಗುತ್ತದೆ.

ಉ) ನಿಯಮ ಉಲ್ಲಂಘನೆಯಾಗಿರುವುದರಿಂದ ಬಡ್ತಿಗೆ ವಂಚಿತರಾಗಿರುವ ನೌಕರರ ಸಂಖ್ಯೆ ಎಷ್ಟು?

ಶ್ರೀ ಶರಣಬಸಪ್ಪ ದರ್ಶನಾಪುರ (ಕೃಷಿ ಮಾರುಕಟ್ಟೆ ಸಚಿವರು)

ಅ) ಹೆಚ್ಚಿನ ಕಾಲವಿಳಂಬವಾಗದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮವಾಗಿ ಅಳವಡಿಸಿಕೊಳ್ಳಲು ಸೂಚಿಸಲಾಗಿದೆ.

ಕೃಷಿ ಮಾರಾಟ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಾವಳಿಗಳನ್ನು ಹೊರಡಿಸುವುದು ಅಂತಿಮ ಹಂತದಲ್ಲಿದೆ. ಪ್ರಸ್ತುತ ಜಾರಿಯಲ್ಲಿರುವ ಕಾರ್ಯಕಾರಿ ಆದೇಶ ರನ್ವಯ ವಿವಿಧ ಪದವೃಂದದ ಹುದ್ದೆಗಳಿಗೆ ಪನೋನ್ನತಿ ನೀಡಲಾಗುತ್ತಿದೆ.

ಆ) ಈ ಬಗ್ಗೆ ಹಲವಾರು ಬಾರಿ (10–13) ಸಭೆಯನ್ನು ಕರೆಯಲಾಗಿದ್ದು, ಕರಡು ವೃಂದ ಮತ್ತು ನೇಮಕಾತಿ ನಿಯಮಗಳನ್ನು ವಿವಿಧ ಇಲಾಖೆಗಳೊಡನೆ ಸಮಾಲೋಚಿಸಿ ಅಂತಿಮ ಗೊಳಿಸಲಾಗಿದೆ.

ಇ) ಪ್ರಸ್ತುತ ಜಾರಿಯಲ್ಲಿರುವ ಕಾರ್ಯಕಾರಿ ಆದೇಶದಂತೆ ನಿಯಮಗಳನ್ನು ಪಾಲಿಸಲಾಗುತ್ತಿದ್ದು ಅಕ್ರಮಗಳಿಗೆ ಅವಕಾಶವಿರುವುದಿಲ್ಲ.

ಈ) ಈ ನಿಯಮಗಳನ್ನು ಅಳವಡಿಸಿಕೊಳ್ಳುವುದರಿಂದ ಎಲ್ಲಾ ಪದವೃಂದದ ಅಧಿಕಾರಿ / ನೌಕರರಿಗೆ ಬಡ್ತಿ ನೀಡಬಹುದಾಗಿರುತ್ತದೆ.

ಉ) ವೃಂದ ಮತ್ತು ನೇಮಕಾತಿ ನಿಯಮಗಳನ್ನು ಹೊರಡಿಸುವುದು ಅಂತಿಮ ಹಂತದಲ್ಲಿದೆ. ಪ್ರಸ್ತುತ ಕಾರ್ಯಕಾರಿ ಆದೇಶಾನುಸಾರ ಪ್ರಥಮ ದರ್ಜೆ ಸಹಾಯಕರ ಪದವೃಂದಕ್ಕೆ ಬಡ್ತಿ ನೀಡುವ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಅಂತಿಮವಾಗಿ ಹೊರಡಿಸುವವರೆಗೆ ಸ್ಥಗಿತಗೊಳಿಸುವಂತೆ ಸೂಚಿಸಲಾಗಿರುತ್ತದೆ. ನಿಯಮ ಉಲ್ಲಂಘನೆ ಯಾಗಿರುವುದಿಲ್ಲ.

384(471) ಶ್ರೀ ಶಿವರಾಮು ಬಿ. (ಗಂಡಸಿ) : ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಮೀಣ ನೀರು ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಹಾಸನ ಜಿಲ್ಲೆಯಲ್ಲಿ ಕುಡಿಯುವ ನೀರಿನ ಯೋಜನೆಗಳಲ್ಲಿ ಶಾಸಕರ ಅಧ್ಯಕ್ಷತೆಯಲ್ಲಿ ಮಂಜೂರಾತಿಯಾದ ಯೋಜನೆಗಳು, ಪ್ರಕೃತಿ ವಿಕೋಪ ಯೋಜನೆಗಳು ಸೇರಿದಂತೆ ಅನುಷ್ಠಾನಗೊಳಿಸುವಾಗ ಅದಕ್ಕೆ ಬೇಕಾದ ಪೈಪು, ಸಿಸ್ಟರ್ನ್ (Cistern) ಇತರೆ ಸಾಮಗ್ರಿಗಳನ್ನು ಇಲಾಖೆಯಿಂದ ಒದಗಿಸಲಾಗಿದೆಯೇ;

ಆ) ಒದಗಿಸಿದ್ದಲ್ಲಿ, ಅವುಗಳನ್ನು ಕೊಂಡುಕೊಳ್ಳುವಾಗ ಸರ್ಕಾರದ ನಿಯಮದಂತೆ ಪಾರದರ್ಶಕ ಕಾಯ್ದೆ ನಿಯಮಗಳನ್ನು ಅನುಸರಿಸಲಾಗಿದೆಯೇ;

ಇ) ಅನುಸರಿಸದಿದ್ದಲ್ಲಿ ಕಾರಣವೇನು? (ವಿವರಗಳನ್ನು ಚನ್ನರಾಯಪಟ್ಟಣ ಮತ್ತು ಹಾಸನಕ್ಕೆ ಸೇರಿದಂತೆ ನೀಡುವುದು)

ಶ್ರೀ ಗೋವಿಂದ ಎಂ. ಕಾರಜೋಳ (ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಮೀಣ ನೀರು ಸರಬರಾಜು ಸಚಿವರು)

ಅ) ಹೌದು.

ಆ) ಮತ್ತು ಇ) ಸರ್ಕಾರದ ಪಾರದರ್ಶಕ ನೀತಿಯನ್ವಯ ಅನುಮೋದಿತ ಸರಬರಾಜು ಸಂಸ್ಥೆಗಳಿಂದ ಸಾಮಗ್ರಿಗಳನ್ನು ಖರೀದಿಸಲಾಗಿದೆ.

386(396) ಶ್ರೀ ಶ್ರೀರಾಮರೆಡ್ಡಿ (ಬಾಗೇಪಲ್ಲಿ) : ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಮೀಣ ನೀರು ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕಳೆದ ವರ್ಷ ನಡೆಸಿದ ಪಡಿತರ ಚೀಟಿದಾರರ ಸಮೀಕ್ಷೆಯಲ್ಲಿ ಗುರ್ತಿಸಲಾಗಿರುವ ಅರ್ಹ ಫಲಾನುಭವಿಗಳಿಗೆ ಪಡಿತರ ಚೀಟಿ ವಿತರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅರ್ಹ ಫಲಾನುಭವಿಗಳೆಲ್ಲರಿಗೂ ಪಡಿತರ ಚೀಟಿ ವಿತರಿಸಲು ಸರ್ಕಾರ ಉದ್ದೇಶಿಸಿದೆಯೇ;

ಇ) ಇದ್ದಲ್ಲಿ, ಈ ಬಗ್ಗೆ ಸರ್ಕಾರ ಏನು ಕ್ರಮ ಕೈಗೊಂಡಿದೆ?